ಮಾಡಲಾಗುತ್ತದೆ. ರಾಜ್ಯ ಸರ್ಕಾರದಿಂದ ಶಾಸನಬದ್ಧ ಅನುದಾನವನ್ನು ಪ್ರತಿ ಗ್ರಾಮ ಪಂಚಾಯತಿಗೆ ಪ್ರತಿ ವರ್ಷ ರೂ. 6.00 ಲಕ್ಷಗಳನ್ನು ಬಿಡುಗಡೆ ಮಾಡಲಾಗುತ್ತಿದೆ.

ಆ) ಗ್ರಾಮ ಪಂಚಾಯತಿಗಳಿಗೆ 13ನೇ ಹಣಕಾಸು ಯೋಜನೆಯಡಿ ಅನುದಾನವನ್ನು ಜನಸಂಖ್ಯೆ ಆಧಾರದ ಮೇಲೆ ನೀಡುತ್ತಿರುವುದರಿಂದ, ಹಾಗೂ ಶಾಸನಬದ್ಧ ಅನುದಾನವನ್ನು ಅಭಿವೃದ್ಧಿ ಕಾರ್ಯಗಳಿಗೆ ನೀಡದೇ ಇರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ.

ಇ) 13ನೇ ಹಣಕಾಸು ಆಯೋಗದಡಿ ಪ್ರತಿ ತಾಲ್ಲೂಕಿಗೆ ಪ್ರತಿ ಸಾಲಿನಲ್ಲಿ ಕನಿಷ್ಠ ರೂ.22.30 ಲಕ್ಷಗಳನ್ನು ಬಿಡುಗಡೆ ಮಾಡಲಾಗುತ್ತದೆ. ಮತ್ತು ತಾಲ್ಲೂಕು ಪಂಚಾಯತ್ ಅಭಿವೃದ್ಧಿ ಅನುದಾನವಾಗಿ 2010–11ನೇ ಸಾಲಿನಲ್ಲಿ ಪ್ರತಿ ತಾಲ್ಲೂಕು ಪಂಚಾಯತಿಗೆ ರೂ.29.78 ಲಕ್ಷಗಳನ್ನು ಬಿಡುಗಡೆ ಮಾಡಲಾಗಿದೆ. ಮತ್ತು 2011–12ನೇ ಸಾಲಿನ ಆಯವ್ಯಯದಲ್ಲಿ ಪ್ರತಿ ತಾಲ್ಲೂಕು ಪಂಚಾಯತಿಗೆ ರೂ.1.00 ಕೋಟಿ ಅನಿರ್ಭಂದಿತ ಅನುದಾನವನ್ನು ಬಿಡುಗಡೆ ಮಾಡಲಾಗುವುದು.

ಸಂವಿಧಾನದ 73ನೇ ತಿದ್ದುಪಡಿಯನ್ವಯ ತಾಲ್ಲೂಕು ಪಂಚಾಯತ್ ಸೇರಿ ಎಲ್ಲಾ ಪಂಚಾಯತ್ ರಾಜ್ ಸಂಸ್ಥೆಗಳು ಅಸ್ತಿತ್ವದಲ್ಲಿರುವುವು.

ಈ) ಗ್ರಾಮ ಪಂಚಾಯತಿಗಳು ಕುಡಿಯುವ ನೀರಿನ ಯೋಜನೆಗಳ ನಿರ್ವಹಣೆ ಮತ್ತು ನಿರಂತರತೆಗಾಗಿ, ಕೇಂದ್ರ ಮತ್ತು ರಾಜ್ಯ ವಲಯಗಳಡಿ ಬಿಡುಗಡೆಯಾಗಿರುವ ನಿರ್ವಹಣಾ ಅನುದಾನದ ಜೊತೆಗೆ, ಬಳಕೆದಾರರ ಶುಲ್ಕ ಪಡೆದುಕೊಡು ಇತರೆ ಅಭಿವೃದ್ಧಿ ನಿಧಿಯನ್ನು ಸಹ ಚಾಲ್ತಿ ಮಾರ್ಗಸೂ ಚಿಗಳನ್ವಯ ಕುಡಿಯುವ ನೀರಿನ ಬಾಬ್ತಿಗಾಗಿ ವಿನಿಯೋಗಿಸಲು ಅವಕಾಶವಿದೆ.

ಜಮಖಂಡಿ ಗ್ರಂಥಾಲಯ

479 (91) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿಯಲ್ಲಿರುವ ಗ್ರಂಥಾಲಯವನ್ನು ಮೇಲ್ದರ್ಜೆ ಗೇರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಆ) ಹತ್ತಾರು ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಹಾಗೂ ಸುಶಿಕ್ಷಿತರಿಗಾಗಿ ಹೊಸ ಹೈಟೆಕ್ ಗ್ರಂಥಾಲಯ ನಿರ್ಮಿಸಲು ಸರ್ಕಾರದ ಉದ್ದೇಶವೇನಾದರೂ ಇದೆಯೇ;

ಇ) ಹಾಗಿದ್ದಲ್ಲಿ, ಪ್ರಸಕ್ತ ವರ್ಷದ ಬಜೆಟ್‌ನಲ್ಲಿ ಈ ಬಗ್ಗೆ ಹಣ ನಿಗಧಿಗೊಳಿಸಲಾಗುವುದೆ?

ಶ್ರೀ ರೇವೂ ನಾಯಕ್ ಬೆಳಮಗಿ (ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು) :

ಅ) – ಇಲ್ಲ –

ಆ) – ಇದೆ –

ಇ) 2011–12ನೇ ಸಾಲಿನ ಆಯ–ವ್ಯಯದಲ್ಲಿ ನಿಗಧಿಗೊಳಿಸ ಲಾಗುವುದು.

ಜಮಖಂಡಿ ಗ್ರಂಥಾಲಯ ಮೇಲ್ದರ್ಜೆಗೇರಿಸುವುದು

480 (689) ಶ್ರೀ ಕುಲಕರ್ಣಿ ಶ್ರೀಕಾಂತ್ ಸುಬ್ಬಾರಾವ್ (ಜಮಖಂಡಿ) : ಮಾನ್ಯ ಲೋಕಶಿಕ್ಷಣ, ಸಾರ್ವಜನಿಕ ಗ್ರಂಥಾಲಯ, ಸಣ್ಣ ಉಳಿತಾಯ ಹಾಗೂ ಲಾಟರಿ ಮತ್ತು ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಜಮಖಂಡಿ ಪಟ್ಟಣದಲ್ಲಿರುವ ಸಾರ್ವಜನಿಕ ಗ್ರಂಥಾಲಯ ಎಷ್ಟು ವರ್ಷಗಳಿಂದ ಕಾರ್ಯ ಮಾಡುತ್ತಿದೆ;

ಆ) ಈ ಗ್ರಂಥಾಲಯನ್ನು ಇಲ್ಲಿಯವರೆಗೆ ಅಗತ್ಯಕ್ಕೆ ತಕ್ಕ ಹಾಗೇ ಮೇಲ್ದರ್ಜೆಗೆ ಏರಿಸಿಲ್ಲವೆಂಬುದನ್ನು ಸರ್ಕಾರ ಮನಗಂಡಿದೆಯೇ;

ಇ) ಈ ಗ್ರಂಥಾಲಯವನ್ನು ಮೇಲ್ದರ್ಜೆಗೆ ಏರಿಸಿ (Hightech) ಸಹಸ್ರಾರು ಸಂಖ್ಯೆಯಲ್ಲಿರುವ ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಅನುಕೂಲ ಮಾಡಲು ಸರ್ಕಾರ ಪ್ರಸಕ್ತ ಸಾಲಿನಲ್ಲಿ ಮಂಜೂರು ನೀಡಬಹುದೇ?